# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು - 572 103
ದೂರವಾಣಿ : 0816-2254546, 0816-2255596, 0816-2255597 ಫ್ಯಾಕ್ಸ್ : 0816-2270719

ಸಂಖ್ಯೆ:ತುವಿ:ಶೈವಿ:2019-20: 260 ದಿನಾಂಕ: 27.04.2019

## ಅಧಿಸೂಚನೆ

**ವಿಷಯ** : 2019-20 ನೇ ಶೈಕ್ಷಣಿಕ ಸಾಲಿನ ಸ್ನಾತಕ ದೈಹಿಕ ಶಿಕ್ಷಣ ಪದವಿಯ ಶೈಕ್ಷಣಿಕ ವೇಳಾಪಟ್ಟಿ ಕುರಿತು.

**ಉಲ್ಲೇಖ**: 1. ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ 292 ಯುಎನ್‌ಇ 2016 ದಿನಾಂಕ:02.09.2016
2. ಶೈಕ್ಷಣಿಕ ವೇಳಾಪಟ್ಟಿ ಸಮಿತಿಯ ಸಭೆಯ ದಿನಾಂಕ: 09.04.2019
3. ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ:22.04.2019 (ಕಂಡಿಕೆ-21) ಹಾಗೂ ದಿನಾಂಕ: 26.04.2019 (ಕಂಡಿಕೆ-25)

* * *

2019-20 ನೇ ಶೈಕ್ಷಣಿಕ ಸಾಲಿನ ಸ್ನಾತಕ ದೈಹಿಕ ಶಿಕ್ಷಣ ಪದವಿಯ ಶೈಕ್ಷಣಿಕ ವೇಳಾಪಟ್ಟಿಯನ್ನು ಉಲ್ಲೇಖ (1) ರ ಸರ್ಕಾರದ ಸುತ್ತೋಲೆ, ಉಲ್ಲೇಖ (2) ರ ಸಮಿತಿಯ ವರದಿ ಹಾಗೂ ಉಲ್ಲೇಖ (3) ರ ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ ಈ ಕೆಳಕಂಡಂತೆ ನಿಗದಿಪಡಿಸಲಾಗಿದೆ.

### I & III ನೇ ಸೆಮಿಸ್ಟರ್

| ಕ್ರಮ ಸಂಖ್ಯೆ | ಶೈಕ್ಷಣಿಕ ವೇಳಾಪಟ್ಟಿ | ದಿನಾಂಕ |
|---|---|---|
| 01. | ಕಾಲೇಜಿನ ಪುನರಾರಂಭ ಮತ್ತು ಅಧ್ಯಾಪಕರುಗಳು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವುದು | 01.08.2019 |
| 02. | ದಂಡ ಶುಲ್ಕವಿಲ್ಲದೆ ಪ್ರವೇಶ ಪಡೆಯಲು ಕೊನೆಯ ದಿನಾಂಕ | 13.08.2019 |
| 03. | I & III ನೇ ಸೆಮಿಸ್ಟರ್ ತರಗತಿಗಳ ಪ್ರಾರಂಭ | 14.08.2019 |
| 04. | ರೂ.1000/- ಗಳ ದಂಡದೊಂದಿಗೆ ಪ್ರವೇಶ ಪಡೆಯಲು ಕೊನೆಯ ದಿನಾಂಕ | 20.08.2019 |
| 05. | ಪ್ರವೇಶ ಪಟ್ಟಿಗಳನ್ನು ತ್ರಿಪ್ರತಿಗಳಲ್ಲಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 16.09.2019 |
| 06. | I & III ನೇ ಸೆಮಿಸ್ಟರ್ ತರಗತಿಗಳ ಮುಕ್ತಾಯ | 10.12.2019 |
| 07. | ರಜಾ ದಿನ | 11.12.2019 ಿಂದ 12.01.2020 ರವರೆಗೆ |
| 08. | ಪ್ರಾಯೋಗಿಕ ಪರೀಕ್ಷೆಗಳ ಪ್ರಾರಂಭ | 16.12.2019 ರಿಂದ 20.12.2019 |
| 09. | I & III ನೇ ಸೆಮಿಸ್ಟರ್ ಸೈದ್ಧಾಂತಿಕ ಪರೀಕ್ಷೆಗಳ ಪ್ರಾರಂಭ | 26.12.2019 |

### II & IV ನೇ ಸೆಮಿಸ್ಟರ್

| | | |
|---|---|---|
| 01. | II & IV ನೇ ಸೆಮಿಸ್ಟರ್ ತರಗತಿಗಳ ಪ್ರಾರಂಭ | 13.01.2020 |
| 02. | II & IV ನೇ ಸೆಮಿಸ್ಟರ್ ತರಗತಿಗಳ ಮುಕ್ತಾಯ | 20.05.2020 |
| 03. | ರಜಾ ದಿನ | 21.05.2020 ರಿಂದ 08.06.2020 ರವರೆಗೆ |
| 04. | ಪ್ರಾಯೋಗಿಕ ಪರೀಕ್ಷೆಗಳ ಪ್ರಾರಂಭ | 25.05.2020 |
| 05 | II & IV ನೇ ಸೆಮಿಸ್ಟರ್ ಸೈದ್ಧಾಂತಿಕ ಪರೀಕ್ಷೆಗಳ ಪ್ರಾರಂಭ | 01.06.2020 |

## ಸೂಚನೆಗಳು

1. ವಿಶ್ವವಿದ್ಯಾನಿಲಯದಿಂದ ಸಂಯೋಜನೆ ಪಡೆಯದ ಯಾವುದೇ ಕಾಲೇಜು ವಿದ್ಯಾರ್ಥಿಗಳನ್ನು ಕೋರ್ಸು/ವಿಷಯಗಳಿಗೆ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ ಮತ್ತು ಪಠ್ಯಕ್ರಮ ಹಾಗೂ ವಿನಿಯಮ ಅನುಮೋದನೆಗೊಳ್ಳದ ಕೋರ್ಸು/ವಿಷಯಗಳಿಗೆ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ.

2. ವಿದ್ಯಾರ್ಥಿಗಳ ಪ್ರವೇಶಾತಿಯನ್ನು ವಿನಿಯಮಕ್ಕನುಗುಣವಾಗಿ ಹಾಗೂ ವಿಶ್ವವಿದ್ಯಾನಿಲಯವು ಕಾಲಕಾಲಕ್ಕೆ ಹೊರಡಿಸುವ ಮಾರ್ಗಸೂಚಿಗಳನ್ವಯ ಮಾಡಿಕೊಳ್ಳುವುದು ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರು ಅಥವಾ ಸಂಸ್ಥೆಯ ಮುಖ್ಯಸ್ಥರ ಪೂರ್ಣ ಜವಾಬ್ದಾರಿಯಾಗಿರುತ್ತದೆ ಮತ್ತು ನಿಯಮಗಳಿಗೆ ವಿರುದ್ಧವಾಗಿ ಮಾಡಿಕೊಳ್ಳಲಾಗುವ ಪ್ರವೇಶಾತಿಯು ಅಮಾನ್ಯವಾಗುತ್ತದೆ.

3. **ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜಿನಲ್ಲಿ ಹೊರ ರಾಜ್ಯದ ವಿದ್ಯಾರ್ಥಿಗಳು ಪ್ರವೇಶಾತಿ ಪಡೆಯುವಾಗ** ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರು ಸದರಿ ವಿದ್ಯಾರ್ಥಿಯು 10+02 ಅಥವಾ ತತ್ಸಮಾನ ಪರೀಕ್ಷೆ ಹಾಗೂ ಸ್ನಾತಕ ಪದವಿಯನ್ನು COBSE/AIU ನಿಂದ ಮಾನ್ಯತೆ ಪಡೆದಿರುವ ಮಂಡಳಿಯಿಂದ ಪಡೆದುಕೊಂಡಿರುವ ಬಗ್ಗೆ **ಖಚಿತಪಡಿಸಿಕೊಳ್ಳುವುದು ಹಾಗೂ ನಿಗದಿತ ಶುಲ್ಕ ಪಾವತಿಸಿ ಅರ್ಹತಾ ಪ್ರಮಾಣ ಪತ್ರ ಪಡೆದ ನಂತರವೇ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದು. ಒಂದು ವೇಳೆ ಅರ್ಹತಾ ಪ್ರಮಾಣ ಪತ್ರ ಪಡೆಯದ ವಿದ್ಯಾರ್ಥಿಗಳನ್ನು ಪ್ರವೇಶಾತಿ ಮಾಡಿಕೊಂಡಲ್ಲಿ ಅಂತಹ ವಿದ್ಯಾರ್ಥಿಗಳ ಪ್ರವೇಶಾನುಮೋದನೆಯನ್ನು ನೀಡಲಾಗುವುದಿಲ್ಲ.**

   **ಹೊರ ದೇಶಗಳ ವಿದ್ಯಾರ್ಥಿಗಳನ್ನು ಪ್ರವೇಶಾತಿ ಮಾಡಿಕೊಳ್ಳುವಾಗ ಈ ಕೆಳಕಂಡ ದಾಖಲಾತಿಗಳನ್ನು ಪಡೆಯತಕ್ಕದ್ದು.**

   a. **ಅರ್ಹತಾ ಪ್ರಮಾಣ ಪತ್ರ**
   b. **ವಿದ್ಯಾರ್ಥಿಯ ವೀಸಾ**
   c. **ಸಕ್ಷಮ ಪ್ರಾಧಿಕಾರವು ನೀಡಿರುವ A.I.D.S. ಮುಕ್ತ ಪ್ರಮಾಣ ಪತ್ರ**

4. (a) ಅನ್ಯ ವಿಶ್ವವಿದ್ಯಾನಿಲಯಗಳಲ್ಲಿ ಪದವಿ ಪೂರೈಸಿರುವ ವಿದ್ಯಾರ್ಥಿಗಳು ಪ್ರವೇಶಾತಿ ಸಂದರ್ಭದಲ್ಲಿ ವಲಸೆ ಪ್ರಮಾಣ ಪತ್ರ ಒದಗಿಸಬೇಕು.
   (b) ಬಿ.ಪಿ.ಇಡಿ. ಕೋರ್ಸಿನ ಅರ್ಹತಾ ಮಾನದಂಡವನ್ನು ಪೂರೈಸದ ಯಾವುದೇ ವಿದ್ಯಾರ್ಥಿಯು ಬಿ.ಪಿ.ಇಡಿ. ಕೋರ್ಸಿಗೆ ಪ್ರವೇಶ ಪಡೆಯಲು ಅರ್ಹತೆ ಹೊಂದಿರುವುದಿಲ್ಲ.

5. ವಿಶ್ವವಿದ್ಯಾನಿಲಯ/ರಾಜ್ಯ ಸರ್ಕಾರವು ನಿಗದಿಪಡಿಸಿರುವ ಪ್ರವೇಶಮಿತಿಗಿಂತ ಹೆಚ್ಚಾಗಿ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ. ಒಂದು ವೇಳೆ ಮಾಡಿಕೊಂಡಲ್ಲಿ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000 ರ ಪ್ರಕರಣ 59(18) ರನ್ವಯ ಅಂತಹ ಪ್ರವೇಶಾತಿಯು ಅಮಾನ್ಯವಾಗುತ್ತದೆ.

6. ವಿದ್ಯಾರ್ಥಿಯು ಪ್ರವೇಶ ಪಡೆದಿರುವ ಕೋರ್ಸಿಗೆ ಸಂಬಂಧಿಸಿದ ವಿನಿಯಮ, ಕನಿಷ್ಠ ಹಾಜರಾತಿ ಮತ್ತು ಪರೀಕ್ಷಾ ಸ್ವರೂಪವನ್ನು ಪ್ರತೀ ವರ್ಷ ವಿದ್ಯಾರ್ಥಿಗಳು ಪ್ರವೇಶಾತಿ ಪಡೆಯುವ ಸಂದರ್ಭದಲ್ಲಿ ವಿದ್ಯಾರ್ಥಿಗಳ ಗಮನಕ್ಕೆ ತರುವುದು ಹಾಗೂ ಅನುಸರಣಾ ವರದಿಯನ್ನು ಪ್ರವೇಶ ಪಟ್ಟಿಯೊಂದಿಗೆ ಸಲ್ಲಿಸುವುದು.

(P.T.O)

7. ಕಾಲೇಜುಗಳು ಆಯಾ ವರ್ಷಗಳಲ್ಲಿ ನಿಗದಿಪಡಿಸುವ ಕೊನೆಯ ದಿನಾಂಕದೊಳಗೆ ಎಲ್ಲಾ ಪ್ರವೇಶಾತಿಗಳನ್ನು ಮಾಡಿಕೊಳ್ಳತಕ್ಕದ್ದು. ಯಾವುದೇ ಕಾರಣಕ್ಕೂ ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ. ಒಂದು ವೇಳೆ ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪ್ರವೇಶಾತಿ ಮಾಡಿಕೊಂಡಲ್ಲಿ ಅಂತಹ ಪ್ರವೇಶಾತಿಯು ಅಮಾನ್ಯವಾಗುತ್ತದೆ.

8. **ಪ್ರಾಂಶುಪಾಲರು/ ಸಂಸ್ಥೆಯ ಮುಖ್ಯಸ್ಥರು ಪ್ರವೇಶಾತಿ ಪಟ್ಟಿಯನ್ನು ಶುಲ್ಕ ಪಾವತಿ ರಶೀದಿಯೊಂದಿಗೆ ತ್ರಿಪ್ರತಿಗಳಲ್ಲಿ ದಿನಾಂಕ: 16.09.2019 ರೊಳಗೆ ಮಾನ್ಯ ಕುಲಸಚಿವರು (ದ್ವಿಪ್ರತಿ) ಹಾಗೂ ಹಣಕಾಸು ಅಧಿಕಾರಿಗಳು (ಒಂದು ಪ್ರತಿ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರಿಗೆ ಸಲ್ಲಿಸುವುದು. ಕಾಲೇಜಿನ ಅಧಿಕಾರಿಗಳಿಗೆ ಶೈಕ್ಷಣಿಕ ವಿಭಾಗಕ್ಕೆ ನಿಗದಿತ ದಿನಾಂಕದಂದು ಎಲ್ಲಾ ಅವಶ್ಯ ದಾಖಲಾತಿಗಳನ್ನು ಒದಗಿಸಲು ಸೂಚಿಸಿದೆ. ಪ್ರಾಂಶುಪಾಲರು/ಸಂಸ್ಥೆಯ ಮುಖ್ಯಸ್ಥರು ಪ್ರವೇಶಾತಿ ಪಟ್ಟಿಯನ್ನು ಸಲ್ಲಿಸುವ ಸಂದರ್ಭದಲ್ಲಿ ಎಲ್ಲಾ ವಿದ್ಯಾರ್ಥಿಗಳ ಪ್ರವೇಶಾತಿಯನ್ನು ವಿಶ್ವವಿದ್ಯಾನಿಲಯದ ವಿನಿಯಮಗಳಿಗನುಗುಣವಾಗಿ ಮಾಡಿಕೊಳ್ಳಲಾಗಿದೆ ಎಂದು ದೃಢೀಕರಿಸುವುದು ಹಾಗೂ ಅನುಸರಣಾ ವರದಿಯನ್ನು ಅಧಿಸೂಚನೆಯ ಪ್ರಕರಣ 06 ರನ್ವಯ ಸಲ್ಲಿಸುವುದು.**

9. ಶೈಕ್ಷಣಿಕ ವೇಳಾಪಟ್ಟಿಯನ್ನು ಎಲ್ಲಾ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳ ಗಮನಕ್ಕೆ ತರುವುದು.

10. ಶೈಕ್ಷಣಿಕ ವೇಳಾಪಟ್ಟಿಯಲ್ಲಿನ ಯಾವುದೇ ದಿನಾಂಕವು ರಜಾ ದಿನವೆಂದು ಘೋಷಿಸಲ್ಪಟ್ಟಲ್ಲಿ ಕಾರ್ಯಕ್ರಮಗಳು ಸದರಿ ದಿನಾಂಕದ ನಂತರದ ಕರ್ತವ್ಯದ ದಿನ ಪ್ರಾರಂಭಗೊಳ್ಳುತ್ತದೆ.

29/08

ಕುಲಸಚಿವರು

ಕುಲಸಚಿವರು

ತುಮಕೂರು ವಿಶ್ವವಿದ್ಯಾನಿಲಯ

ಗೆ,

ಪ್ರಾಂಶುಪಾಲರು, ಶ್ರೀ ಸಿದ್ಧಗಂಗಾ ದೈಹಿಕ ಶಿಕ್ಷಣ ಮಹಾವಿದ್ಯಾಲಯ, ಶ್ರೀ ಸಿದ್ಧಗಂಗಾ ಮಠ, ಕ್ಯಾತ್ಸಂದ್ರ, ತುಮಕೂರು.

ಪ್ರತಿಗಳು:

1. ಕುಲಸಚಿವರು(ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಕುಲಸಚಿವರು, ಮೈಸೂರು/ಬೆಂಗಳೂರು/ಕರ್ನಾಟಕ/ಕುವೆಂಪು/ಮಂಗಳೂರು/ದಾವಣಗೆರೆ/ಕರ್ನಾಟಕ ಮಹಿಳಾ ವಿಶ್ವವಿದ್ಯಾನಿಲಯ.
3. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಡೀನರು, ಕಲಾ, ವಿಜ್ಞಾನ, ವಾಣಿಜ್ಯ ಮತ್ತು ಶಿಕ್ಷಣ ನಿಕಾಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಗ್ರಂಥಪಾಲಕರು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.
6. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
8. ಎಲ್ಲಾ ವಿಭಾಗಗಳ ಉಪಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
9. ಮುಖ್ಯಸ್ಥರು, ಬಿ.ಎಫ್.ಎ. ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
10. ಎನ್.ಎಸ್.ಎಸ್. ಕೋ-ಆರ್ಡಿನೇಟರ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
11. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು - ವೆಬ್‌ಸೈಟ್‌ನಲ್ಲಿ ಇಂದೇ ಪ್ರಕಟಿಸುವುದು.
12. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
13. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
14. ಕಚೇರಿ ಪ್ರತಿ